# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 578 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ |
| ಉತ್ತರಿಸಬೇಕಾದ ದಿನಾಂಕ | 08.12.2023 |
| ಉತ್ತರಿಸುವ ಸಚಿವರು | ಸಮಾಜ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವಸತಿ ಶಿಕ್ಷಣ ಸಂಸ್ಥೆಗಳ ಅಡಿಯಲ್ಲಿ ಬರುವ (ಕ್ರೈಸ್) ಶಾಲೆಗಳಲ್ಲಿನ ಸಿಬ್ಬಂದಿಗಳಿಗೆ ನವೋದಯ ಸಿಬ್ಬಂದಿಗಳಿಗೆ ನೀಡುವ ಮಾದರಿಯಲ್ಲಿ ಉಚಿತ ವಿದ್ಯುತ್/ ವಸತಿ ಗೃಹ ಸೌಲಭ್ಯ ಕಲ್ಪಿಸಲು ಸರ್ಕಾರ ಚಿಂತಿಸುವುದೇ; | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಪರಿಶಿಷ್ಟ ಜಾತಿ-503, ಪರಿಶಿಷ್ಟ ವರ್ಗ -156, ಹಿಂದುಳಿದ ವರ್ಗ-174 ಒಟ್ಟಾರೆ 833 ವಸತಿ ಶಾಲೆ/ಕಾಲೇಜುಗಳು ಕಾರ್ಯನಿರ್ವಹಿಸುತ್ತಿದ್ದು, 638 ವಸತಿ ಶಾಲೆಗಳು ಸ್ವಂತ ಕಟ್ಟಡವನ್ನು ಹೊಂದಿರುತ್ತವೆ. ಸ್ವಂತ ಕಟ್ಟಡ ಹೊಂದಿರುವ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಸಿಬ್ಬಂದಿಗಳಿಗೆ ವಸತಿ ಗೃಹಗಳನ್ನು ನಿರ್ಮಾಣ ಮಾಡಲಾಗಿದ್ದು, ಸದರಿ ವಸತಿ ಗೃಹಗಳಲ್ಲಿ ವಾಸ್ತವ್ಯ ಹೂಡಿರುವ ಖಾಯಂ ಸಿಬ್ಬಂದಿಗಳಿಗೆ ವಸತಿ ಶಾಲೆಗೆ ವಿದ್ಯುತ್ ನಿಗಮದಿಂದ ನೀಡಲಾಗುವ ಒಟ್ಟು ಬಿಲ್ಲಿನ ಮೊತ್ತದಲ್ಲಿ ಶೇ. 10 ರಷ್ಟು ಮೊತ್ತವನ್ನು ಕಡಿತಗೊಳಿಸಲಾಗುತ್ತಿದೆ.<br>ಸನ್ಮಾನ್ಯ ಮುಖ್ಯಮಂತ್ರಿಗಳು ಸೂಚಿಸಿರುವಂತೆ ಸರ್ಕಾರಿ ಶಾಲೆಗಳಿಗೆ ಉಚಿತ ವಿದ್ಯುತ್ ಕಲ್ಪಿಸಲು ಸಂಘದ ವಸತಿ ಶಾಲೆ/ಕಾಲೇಜುಗಳಿಗೂ ಸಹ ಈ ಸೌಲಭ್ಯವನ್ನು ವಿಸ್ತರಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. |
| ಆ) | ಹಾಗಿದ್ದಲ್ಲಿ ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; | |
| ಇ) | 2019-20 ನೇ ಸಾಲಿನ ಅಯವ್ಯಯದಲ್ಲಿ ಘೋಷಿಸಿದಂತೆ 100 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಮೇಲ್ದರ್ಜೆಗೇರಿಸಿ, ಪದವಿ ಪೂರ್ವ ಹಂತದಲ್ಲಿ ವಿಜ್ಞಾನ ಮತ್ತು ವಾಣಿಜ್ಯ ತರಗತಿಗಳನ್ನು ಪ್ರಾರಂಭಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು; | 2019-20 ನೇ ಸಾಲಿನ ಅಯವ್ಯಯದಲ್ಲಿ ಘೋಷಿಸಿರುವಂತೆ 100 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಮೇಲ್ದರ್ಜೆಗೇರಿಸಿ, ಪದವಿ ಪೂರ್ವ ಹಂತದಲ್ಲಿ ವಿಜ್ಞಾನ ಮತ್ತು ವಾಣಿಜ್ಯ ತರಗತಿಗಳನ್ನು ಪ್ರಾರಂಭಿಸಲು ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿ, ಸದರಿ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯು ಸಹಮತಿ ನೀಡಿರುವುದಿಲ್ಲ. |
| ಈ) | ಯಾವ ಕಾಲಮಿತಿಯಲ್ಲಿ ಸದರಿ ತರಗತಿಗಳನ್ನು ಪ್ರಾರಂಭಿಸಲಾಗುವುದು? | |

ಸಕಇ-ಎಂಡಿಎಸ್/221/2023

(ಡಾ.ಹೆಚ್.ಸಿ. ಮಹದೇವಪ್ಪ )
ಸಮಾಜ ಕಲ್ಯಾಣ ಸಚಿವರು